ಶನಿವಾರ 27-09-2025 ಬೆಂಗಳೂರು ಬೆಲೆ: 5ರೂ. 4ಪುಟಗಳು ಸಂಪುಟ 01-ಸಂಚಿಕೆ 63 Digital Varthe Kannada Daily Volume 01 - Issue 63 Saturday 27-09-2025 Price: 5/- Rs 2 Pages Bengalore

DIGITAL VARTHE
www.digitalvarthe.com
digitalvarthe@gmail.com

ಡಿಜಿಟಲ್ ವಾರ್ತೆ
ಕನ್ನಡಿಗರ ಶಕ್ತಿ

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು
ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು
RNI:KNKAN/25/A1348
ಕನ್ನಡ ದಿನಪತ್ರಿಕೆ

# ಸಮೀಕ್ಷೆ ನಿರ್ಲಕ್ಷ್ಯ ಮಾಡಿದರೆ ಕಠಿಣ ಕ್ರಮ :ಸಿಎಂ ಎಚ್ಚರಿಕೆ

ಬೆಂಗಳೂರು: ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯಲ್ಲಿ ಭಾಗವಹಿಸದೇ ಕರ್ತವ್ಯ ಲೋಪ ಎಸಗುವವರು ಹಾಗೂ ದತ್ತಾಂಶ ಸಂಗ್ರಹದಲ್ಲಿ ಬೇಜವಾಬ್ದಾರಿತನ ಪ್ರದರ್ಶಿಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳ ಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಎಚ್ಚರಿಸಿದ್ದಾರೆ. ಗೃಹ ಕಚೇರಿ ಕೃಷ್ಣಾದಿಂದ ಹಿರಿಯ ಅಧಿಕಾರಿಗಳ ಜೊತೆ ವಿಡಿಯೋ ಸಂವಾದದಲ್ಲಿ ಚರ್ಚೆ ನಡೆಸಿದ ಮುಖ್ಯಮಂತ್ರಿಯವರು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದ್ದಾರೆ.

ಈ ಹಿಂದೆ ಕಾಂತರಾಜು ನೇತೃತ್ವದಲ್ಲಿ ಹಿಂದುಳಿದ ವರ್ಗಗಳ ಆಯೋಗ ನಡೆಸಿದ್ದ ಸಮೀಕ್ಷೆಯಲ್ಲಿ ಪೂರ್ಣ ಪ್ರಮಾಣದ ಮಾಹಿತಿ ಕಲೆ ಹಾಕಿರಲಿಲ್ಲ. ಆಯೋಗ ನೀಡಿದ್ದ ಸೂಚನೆಗಳನ್ನು ಸರಿಯಾಗಿ ಪಾಲಿಸಿರಲಿಲ್ಲ. ಇದರಿಂದಾಗಿ ಸಾಕಷ್ಟು ಸಮಸ್ಯೆಯಾಗಿತ್ತು. ಕೊನೆಗೆ ಆ ವರದಿ ಅಂಗೀಕರಿಸಲು ಆಗದೆ, ಬಿಡಲೂ ಆಗದೇ ಗೊಂದಲದ ಪರಿಸ್ಥಿತಿ ನಿರ್ಮಾಣವಾಗಿದೆ. ಪ್ರಸ್ತುತ ನಡೆಯುತ್ತಿರುವ ಸಮೀಕ್ಷೆಯನ್ನು ಕರಾರುವಾಕ್ಕಾಗಿ ಹಾಗೂ ಕಾನೂನಾತಕವಾಗಿ ನಡೆಸಬೇಕು. ಪ್ರತಿಹಂತದಲ್ಲೂ ಸಮೀಕ್ಷಾದಾರರು ಮಾಹಿತಿ ಸಂಗ್ರಹದ ದಸ್ತಾವೇಜುಗಳಿಗೆ ಸಹಿ ಹಾಕಿ, ಅಧಿಕೃತಗೊಳಿಸಬೇಕು. ಯಾವುದು ಅನಧಿಕೃತ ಹಾಗೂ ಆಧಾರರಹಿತ ಎಂಬ ಸನ್ನಿವೇಶ ಸೃಷ್ಟಿಯಾಗಬಾರದು ಎಂದು ಮುಖ್ಯಮಂತ್ರಿ ಅವರು ಸೂಚನೆ ನೀಡಿದರು.



ಕೆಲವು ಅಧಿಕಾರಿಗಳು ಸಮೀಕ್ಷೆಯಲ್ಲಿ ಭಾಗವಹಿಸಲು ಹಿಂದೇಟು ಹಾಕುತ್ತಿದ್ದಾರೆ. ಮೊಬೈಲ್ ಬಳಕೆಗೆ ತಾಂತ್ರಿಕವಾದ ಸಾಮರ್ಥ್ಯವಿಲ್ಲವೆಂಬ ನೆಪ ಒಡ್ಡುತ್ತಿದ್ದು ಅಂಥವರ ಪಟ್ಟಿಯನ್ನು ಪಡೆದು ಸೂಕ್ತ ಪರಿಶೀಲನೆ ನಡೆಸಿ ನಂತರ ವಿನಾಯಿತಿ ನೀಡಿ ಪರ್ಯಾಯ ಸಮೀಕ್ಷಾದಾರರನ್ನು ನಿಯೋಜಿಸಬೇಕೆಂದು ತಾಕೀತು ಮಾಡಿದ್ದಾರೆ. ಸಮೀಕ್ಷೆಗೆ ಆರಂಭಿಕ ಹಂತದಲ್ಲಿ ತೀವ್ರ ಹಿನ್ನಡೆಯಾಗಿದ್ದು, ಇದೇ ವೇಗದಲ್ಲಿ ಗಣತಿ ನಡೆದರೆ ಒಂದು ತಿಂಗಳಾದರೂ ಪೂರ್ಣಗೊಳ್ಳುವುದಿಲ್ಲ. ಪ್ರತಿ ದಿನ ಸರಾಸರಿ 10 ಲಕ್ಷ ಮನೆಗಳಂತೆ ಸಮೀಕ್ಷೆ ನಡೆಯಬೇಕಿತ್ತು. ಅದರ ಅಂ-ದಾಜಿನ ಪ್ರಕಾರ ಸರಿಸುಮಾರು ಕನಿಷ್ಠ 50 ಲಕ್ಷ ಮನೆಗಳ ಸಮೀಕ್ಷೆಯಾಗಬೇಕಿತ್ತು. ಆದರೆ 5 ಲಕ್ಷ ಮನೆಗಳ ಸಮೀಕ್ಷೆಯೂ ಪೂರ್ಣವಾಗಿಲ್ಲ ಎಂದು ಮುಖ್ಯಮಂತ್ರಿ ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ತಾಂತ್ರಿಕ ಸಮಸ್ಯೆಗಳ ಬಗ್ಗೆ ಅಧಿಕಾರಿಗಳು ನೆಪ ಹೇಳುತ್ತಿದ್ದಾರೆ. ಇದನ್ನು ಸಹಿಸಲು ಸಾಧ್ಯವಿಲ್ಲ . ಸಮೀಕ್ಷೆ ನಡೆಯುವುದು ಎರಡು ತಿಂಗಳ ಮೊದಲೇ ನಿಗದಿಯಾಗಿತ್ತು. ಅಂದಿನಿಂದಲೂ ಪೂರ್ವ ತಯಾರಿ ಮಾಡಿಕೊಳ್ಳದೆ ಕಾಲಹರಣ ಮಾಡಿದ್ದೇಕೆ ಎಂದು ಮುಖ್ಯಮಂತ್ರಿಯವರು ಸಭೆಯಲ್ಲಿ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ಸಮೀಕ್ಷೆಯನ್ನು ವಿಫಲಗೊಳಿಸಬೇಕು ಎಂಬ ಕಾರಣ-ಕ್ಕಾಗಿಯೇ ವ್ಯವಸ್ಥಿತವಾದ ಅಪಪ್ರಚಾರಗಳು ನಡೆಯುತ್ತಿವೆ. ಇದಕ್ಕೆ ಕಿವಿಗೊಡಬಾರದು, ಸಮೀಕ್ಷಾದಾರರು ತಮ ಜವಾಬ್ದಾರಿಯನ್ನು ನಿಭಾಯಿಸಬೇಕು. ತಾಂತ್ರಿಕ ತೊಂದರೆ ಸೇ-ರಿದಂತೆ ಯಾವುದೇ ಅಡಚಣೆಗಳಿದ್ದರೂ ಅದನ್ನು ಹಿರಿಯ ಅಧಿಕಾರಿಗಳು ತಕ್ಷಣ ಸ್ಪಂದಿಸಿ ಬಗೆ ಹರಿಸಬೇಕು. ಯಾವುದೇ ಹಂತದಲ್ಲಿ ಲೋಪಗಳಾಗಿದ್ದರೂ ತಪ್ಪಿತಸ್ಥರ ವಿರುದ್ಧ ಮುಲಾಜಿಲ್ಲದೆ ಕ್ರಮ ಜರುಗಿಸುತ್ತೇವೆ ಎಂದು ಎಚ್ಚರ ನೀಡಲಾಗಿದೆ.

ಇದು ಐತಿಹಾಸಿಕ ಮಹತ್ವ ಪೂರ್ಣವಾದ ಸಮೀಕ್ಷೆಯೆಂಬುದನ್ನು ಅಧಿಕಾ-ರಿಗಳು ಗಮನದಲ್ಲಿಟ್ಟುಕೊಳ್ಳಬೇಕು. ಪ್ರತಿ ಸಂದರ್ಭದಲ್ಲೂ ತಮ ಮನೆಯ ಕೆಲಸ ಮಾಡುತ್ತಿದ್ದೇವೆ ಎಂಬ ಬದ್ಧತೆ ಹಾಗೂ ಪ್ರಾಮಾಣಿಕತೆಯಿಂದ ತೊಡಗಿಸಿಕೊಳ್ಳಬೇಕು ಎಂದು ಸಲಹೆ ನೀಡಿದ್ದಾರೆ. ಕಂದಾಯ, ಹಿಂದುಳಿದ ವರ್ಗಗಳ ಕಲ್ಯಾಣ, ಶಾಲಾ ಶಿಕ್ಷಣ ಸಾಕ್ಷರತೆ, ಪೌರಾಡಳಿತ, ನಗರಾಭಿವೃದ್ಧಿ, ಜಿಬಿಎಗೆ ಸೇರಿದಂತೆ ಹಲವು ಇಲಾಖೆಗಳ ಪ್ರಧಾನ ಕಾರ್ಯದರ್ಶಿಗಳು, ಕಾರ್ಯದರ್ಶಿಗಳು, ಆಯುಕ್ತರು, ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾ-ರಿಗಳು ವಿಡಿಯೋ ಸಂವಾದದಲ್ಲಿದ್ದರು. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಎಚ್.ಕೆ.ಪಾಟೀಲ್, ಶಿವರಾಜ ತಂಗಡಗಿ, ಕೃಷ್ಣ ಭೈರೇಗೌಡ, ರಹೀಂ ಖಾನ್, ಭೈರತಿ ಬಸವರಾಜ್, ಮಧು ಬಂಗಾರಪ್ಪ, ಬೋಸರಾಜು, ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಮಧುಸೂದನ ನಾಯ್?ಕ, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಮುಖ್ಯಮಂತ್ರಿ ಅವರ ರಾಜಕೀಯ ಕಾರ್ಯದರ್ಶಿ ನಸೀರ್ ಅಹದ್, ಕಾನೂನು ಸಲಹೆಗಾರ ಪೊನ್ನಣ್ಣ, ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ, ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರ್ವೇಜ್ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಧರ್ಮಸ್ಥಳ ಪ್ರಕರಣ ಕುರಿತು ಗೃಹ ಸಚಿವ ಪರಮೇಶ್ವರ್–ಪ್ರಣಬ್ ಮೊಹಾಂತಿ ಚರ್ಚೆ



ಬೆಂಗಳೂರು: ಧರ್ಮಸ್ಥಳದ ಪ್ರಕರಣಗಳ ತನಿಖೆ ನಡೆಸುತ್ತಿರುವ ಎಸ್ಐಟಿ ಮುಖ್ಯಸ್ಥ ಪ್ರಣಬ್ ಮೊಹಾಂತಿ ಇಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರನ್ನು ಭೇಟಿ ಮಾಡಿ ಮಹತ್ವದ ಚರ್ಚೆ ನಡೆಸಿದ್ದಾರೆ. ಧರ್ಮಸ್ಥಳದಲ್ಲಿನ ಪ್ರಕರಣಗಳ ತನಿಖೆಗೆ ಚಿನ್ನಯ್ಯ ಮತ್ತು ಸಂಗಡಿಗರು ಸಲ್ಲಿಸಿದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಸುಪ್ರೀಂ ಕೋರ್ಟ್ ಮೇ 5ರಂದೇ ವಜಾಗೊಳಿಸಿ, ಕಠಿಣ ಶಬ್ದಗಳಲ್ಲಿ ತರಾಟೆಗೆ ತೆಗೆದುಕೊಂಡಿತ್ತು. ಆ ಬಳಿಕ ಚಿನ್ನಯ್ಯ ತಲೆ ಬುರುಡೆಯೊಂದನ್ನು ತಂದು ನ್ಯಾಯಾಧೀಶರ ಮುಂದೆ ಹಾಜರು ಪಡಿಸಿ, ಸ್ವಯಂ ಪ್ರೇರಿತ ಹೇಳಿಕೆ ದಾಖಲಿಸಿದ್ದು, ಮಾಧ್ಯಮಗಳಲ್ಲೂ ಭಾರೀ ಸುದ್ದಿಯಾಗಿತ್ತು.

ಬಳಿಕ ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮೀ ಚೌಧರಿ ಅವರು, ಮುಖ್ಯಮಂತ್ರಿಯವರಿಗೆ ಪತ್ರ ಬರೆದು, ನೂರಾರು ಮಹಿಳೆಯರ ಮೇಲೆ ಅತ್ಯಾಚಾರ ಹಾಗೂ ಹೂತು ಹಾಕಿರುವ ಪ್ರಕರಣಗಳನ್ನು ತನಿಖೆ ನಡೆಸಲು ಎಸ್ಐಟಿ ರಚಿಸುವಂತೆ ಪತ್ರ ಬರೆದಿದ್ದರು. ಅದರ ಆಧಾರದ ಮೇಲೆ ಮುಖ್ಯಮಂತ್ರಿ ಅವರು ಪ್ರಣಬ್ ಮೊಹಾಂತಿ ನೇತೃತ್ವದಲ್ಲಿ ಎಸ್ಐಟಿ ರಚಿಸಿದ್ದರು.
ಎಸ್ಐಟಿ ಹಲವಾರು ಸ್ಥಳಗಳಲ್ಲಿ ಉತ್ಖನನ ಮಾಡಿದೆ. ಧರ್ಮಸ್ಥಳದ ವಿರುದ್ಧ ಅಪಪ್ರಚಾರ ಮಾಡಿದವರ ವಿರುದ್ಧವೂ ತನಿಖೆ ನಡೆಸಿದೆ. ಈಗ ಮೇ 5ರಂದು ಸಾರ್ವಜನಿಕ ಹಿತಾಸಕ್ತಿ ವಜಾಗೊಂಡಿರುವುದು ತಡವಾಗಿ ಬೆಳಕಿಗೆ ಬಂದಿದೆ.

ದೇಶದ ಸರ್ವೋಚ್ಚ ನ್ಯಾಯಾಲಯವೇ ತನಿಖೆ ಅಗತ್ಯವಿಲ್ಲ ಎಂದು ಸಾರ್ವಜನಿಕ ಹಿತಾಸಕ್ತಿಯನ್ನು ವಜಾಗೊಳಿಸಿದ ಬಳಿಕ ರಚಿಸಲಾಗಿರುವ ಎಸ್ಐಟಿಯ ಔಚಿತ್ಯದ ಬಗ್ಗೆ ನಾನಾ ರೀತಿಯ ಪ್ರಶ್ನೆಗಳು ಉದ್ಭವಿಸಿವೆ. ಈ ಹಿನ್ನೆಲೆಯಲ್ಲಿ ಪ್ರಣಬ್ ಮೊಹಾಂತಿ ಅವರು ಗೃಹ ಸಚಿವರ ಮನೆಗೆ ಭೇಟಿ ನೀಡಿ ದಾಖಲೆಗಳ ಸಹಿತವಾಗಿ ವಿವರಣೆ ನೀಡಿದ್ದಾರೆ.

ಹಿರಿಯ ವಕೀಲರಾದ ಕೆ.ವಿ. ಧನಂಜಯ ಅವರು, ಚಿನ್ನಯ್ಯ ಹೆಸರಿನಲ್ಲಿ ಸುಪ್ರೀಂಕೋರ್ಟ್‌ನಲ್ಲಿ ದಾಖಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿ(ಪಿಐ-ಎಲ್)ಯಲ್ಲಿ 1995ರಿಂದ 98ರ ನಡುವೆ ಹಲವಾರು ಶವಗಳು ನೇತ್ರಾವತಿ ನದಿಯಲ್ಲಿ ತೇಲಿಕೊಂಡು ಬಂದಿವೆ. ಅವುಗಳನ್ನು ಧರ್ಮಸ್ಥಳದ ಮೇಲ್ವಿಚಾರಕ ನನ್ನಿಂದ ಬಲವಂತವಾಗಿ ಸಂಸ್ಕಾರ ಮಾಡಿಸಿದ್ದಾರೆ. ಈ ರೀತಿ ತೇಲಿ ಬಂದ ಶವಗಳಲ್ಲಿ ಲೈಂಗಿಕ ದೌರ್ಜನ್ಯಕ್ಕೆ ತುತ್ತಾದ ಶವಗಳೂ ಇದ್ದವು ಎಂದು ಪಿಐಎಲ್‌ನಲ್ಲಿ ಉಲ್ಲೇಖಿಸಲಾಗಿತ್ತು.
2010ರಲ್ಲಿ ಬಾಲಕಿಯೊಬ್ಬಳ ಶವವನ್ನು ಸಂಸ್ಕಾರ ಮಾಡಲಾಗಿದೆ. ಆ ಶವದಲ್ಲಿ ಲೈಂಗಿಕ ದೌರ್ಜನ್ಯದ ಗುರುತುಗಳು ಇದ್ದವು ಎಂದು ದೂರಲಾಗಿದೆ. 2008ರಿಂದ 2014ರ ನಡುವೆ ಹಲವಾರು ಸಾವುಗಳಾಗಿದ್ದು, ಅವು ಕೊಲೆ ಮತ್ತು ಅತ್ಯಾಚಾರಕ್ಕೊಳಗಾಗಿದ್ದವು ಎಂದು ಉಲ್ಲೇಖಿಸಿಲಾಗಿತ್ತು.

ಆದರೆ ಪಿಐಎಲ್ ಅನ್ನು ವಜಾಗೊಳಿಸಿದ ಸುಪ್ರೀಂಕೋರ್ಟ್ ಇದು ಸಾರ್ವಜನಿಕ ಹಿತಾಸಕ್ತಿ ಅರ್ಜಿ ಅಲ್ಲ, ಪಬ್ಲಿಸಿಟಿ ಇಂಟ್ರೆಸ್ಟ್ ಲಿಟಿಗೇಷನ್, ಪೈಸಾ ಇಂಟ್ರೆಸ್ಟ್ ಲಿಟಿಗೇಷನ್, ಪ್ರೈವೆಟ್ ಇಂಟ್ರೆಸ್ಟ್ ಲಿಟಿಗೇಷನ್, ಪೊಲಿಟಿಕಲ್ ಇಂಟ್ರೆಸ್ಟ್ ಲಿಟಿಗೇಷನ್ ಎಂದು ಕಟು ಶಬ್ಧಗಳಲ್ಲಿ ನ್ಯಾಯಮೂರ್ತಿಗಳಾದ ಬಿ.ವಿ.ನಾಗರತ್ನ, ಸತೀಶ್ ಚಂದ್ರಶರ್ಮ ಅವರ ವಿಭಾಗೀಯ ಪೀಠ ಆಕ್ಷೇಪಿಸಿ, ಪಿಐಎಲ್‌ಅನ್ನು ವಜಾಗೊಳಿಸಿತ್ತು.
ಈ ಮಾಹಿತಿಯನ್ನು ಬುರುಡೆ ಗ್ಯಾಂಗ್ ಮುಚ್ಚಿಟ್ಟು, ಸರ್ಕಾರವನ್ನು ದಿಕ್ಕು ತಪ್ಪಿಸಿ ಎಸ್ಐಟಿ ರಚಿಸುವಂತೆ ಮಾಡಿರುವ ಬಗ್ಗೆ ಚರ್ಚೆಗಳು ಈಗ ನಡೆದಿವೆ. ಎಸ್ಐ-ಟಿಯನ್ನು ರದ್ದು ಮಾಡಿ, ಸ್ಥಳೀಯ ಪೊಲೀಸರಿಂದಲೇ ಪ್ರಕರಣಗಳ ತನಿಖೆಯನ್ನು ಮುಂದುವರೆಸುವ ಬಗ್ಗೆಯೂ ಪ್ರಸ್ತಾಪಗಳಿವೆ.
ಗೃಹ ಸಚಿವ ಪರಮೇಶ್ವರ್ ಅವರು ಇಂದು ಮುಖ್ಯಮಂತ್ರಿಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿದ್ದು, ಪಿಐಎಲ್ ವಜಾ, ಎಸ್ಐಟಿ ಯೋಜನೆ ಹಾಗೂ ತನಿಖೆಯ ಪ್ರಗತಿಯ ಬಗ್ಗೆ ಸಮಗ್ರ ವಿವರಣೆ ನೀಡಿದ್ದಾರೆ.

ಮುಖ್ಯಮಂತ್ರಿ ಹಾಗೂ ಗೃಹಸಚಿವರ ಭೇಟಿಗೂ ಮುನ್ನ ಪೂರ್ವಭಾವಿಯಾಗಿ ಪ್ರಣಬ್ ಮೊಹಾಂತಿ ಅವರು ದಾಖಲೆಗಳ ಸಹಿತ ಗೃಹ ಸಚಿವರಿಗೆ ವಿವರಣೆ ನೀಡಿದ್ದರು. ಈ ಸಂದರ್ಭದಲ್ಲಿ ತನಿಖೆಯ ಪ್ರಗತಿ ಬಗ್ಗೆಯೂ ಮಾಹಿತಿ ನೀಡಿದ್ದಾರೆ. ಅತ್ತ ಶಿವಮೊಗ್ಗ ಜೈಲಿನಲ್ಲಿರುವ ದೂರುದಾರ ಚಿನ್ನಯ್ಯ ಬೆಳ್ತಂಗಡಿ ನ್ಯಾಯಾಲಯಕ್ಕೆ ಹಾಜರಾಗಿ ಹೊರ ಬರುವಾಗ ಕಣ್ಣೀರು ಹಾಕಿರುವುದು ನಾನಾ ರೀತಿಯ ವ್ಯಾಖ್ಯಾನಗಳಿಗೆ ಕಾರಣವಾಗಿದೆ.

# ಬೆಂಗಳೂರಿನಾದ್ಯಂತ ವಾರದಲ್ಲಿ 2 ದಿನ ಪೊಲೀಸರ ವಿಶೇಷ ಗಸ್ತು

ಬೆಂಗಳೂರು: ನಗರದಲ್ಲಿ ಕಾನೂನು ಬಾಹಿರ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಕ್ರಮಕೈಗೊಳ್ಳಲಾಗಿದ್ದು, ವಾರದಲ್ಲಿ ಎರಡು ದಿನ ವಿಶೇಷ ಕಾರ್ಯಾಚರಣೆ ನಡೆಸಲಾಗುವುದು ಎಂದು ನಗರ ಪೊಲೀಸ್ ಆಯುಕ್ತ ಸೀಮಂತ್‌ಕುಮಾರ್ ಸಿಂಗ್ ತಿಳಿಸಿದ್ದಾರೆ.
ಮಲ್ಲೇಶ್ವರಂನ 18ನೇ ಅಡ್ಡ ರಸ್ತೆಯಲ್ಲಿರುವ ಮೈದಾನದಲ್ಲಿ ಉತ್ತರ ವಿಭಾಗದ ಪೊಲೀಸರು ಹಮಿಕೊಂಡಿದ್ದ ರಾಣಿ ಚೆನ್ನಮ ಪಡೆ-ಮಹಿಳಾ ಜಾಗೃತಿ ಕಾರ್ಯಕ್ರಮಕ್ಕೂ ಮುನ್ನ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ಸಾರ್ವಜನಿಕರಲ್ಲಿ ಸ್ಥೈರ್ಯ ಮೂಡಿಸಲು ನಗರದಾದ್ಯಂತ ಪೊಲೀಸರು ನಾಕಾ ಬಂದಿ ಹಾಕಿ ಪರಿಶೀಲಿಸುತ್ತಿದ್ದಾಗ ಮಾದಕ ವಸ್ತುಗಳು ಪತ್ತೆಯಾಗಿವೆ. ಅಲ್ಲದೇ ದಾಖಲೆ ಇಲ್ಲದ ಸಾವಿರಕ್ಕೂ ಹೆಚ್ಚು ದ್ವಿಚಕ್ರ ವಾಹನಗಳನ್ನು ಪತ್ತೆ ಹಚ್ಚಲಾಗಿದೆ ಎಂದರು.
ಜನಸ್ನೇಹಿಯಾಗಿ ಪೊಲೀಸ್ ವ್ಯವಸ್ಥೆ ಬಲಪಡಿಸಲು ಕ್ರಮ ವಹಿಸಲಾಗಿದೆ. ನಗರದಲ್ಲಿ ಅಪರಾಧ ಚಟುವಟಿಕೆಗಳ ಕಡಿವಾಣಕ್ಕೆ ಗಸ್ತು ಕ್ರಮ ಕೈಗೊಳ್ಳಲಾಗಿದೆ. ಪೊಲೀಸ್ ಠಾಣೆಯ ಎಲ್ಲಾ ಸಿಬ್ಬಂದಿ ಈ ಕಾರ್ಯಾಚರಣೆಯಲ್ಲಿ ಭಾಗಿಯಾಗಿದ್ದಾರೆ ಎಂದು ಹೇಳಿದರು.ಅಪರಾಧ ವಿಭಾಗದ ಪೊಲೀಸರಿಗೆ ನಗರದಲ್ಲಿ ಹೆಚ್ಚು ನಾಕಾ ಬಂಧಿ,



ಗಸ್ತು ಹಾಗೂ ಏರಿಯಾ ಡೊಮಿನೇಷನ್‌ಗೆ ಮಾಡುವಂತೆ ಸೂಚಿಸಿರುವ ಆಯುಕ್ತರು, ರಾತ್ರಿ ಗಸ್ತು ಹೊರತುಪಡಿಸಿ ಹೆಚ್ಚುವರಿಯಾಗಿ ಗಸ್ತು ಮಾಡಲು ಸಲಹೆ ನೀಡಿದ್ದಾರೆ.

ಪ್ರತಿ ಮಂಗಳವಾರ ಹಾಗೂ ಗುರುವಾರ ಪೊಲೀಸ್ ಠಾಣಾ ವ್ಯಾಪ್ತಿಯ ಒಂದು ಏರಿಯಾವನ್ನು ಡೊಮಿನೇಷನ್ ಮಾಡಲು, ರಾತ್ರಿ 9 ಗಂಟೆಯಿಂದ 11 ಗಂಟೆಯ ಅಂತರದಲ್ಲಿ ತಪಾಸಣೆ ಮಾಡುವಂತೆ, ಪರಿಶೀಲನೆ ವೇಳೆ ಮಹಿಳೆಯರು ಮತ್ತು ಮಕ್ಕಳ ನಡುವೆ ಒಳ್ಳೆಯ ರೀತಿ ವರ್ತಿಸುವಂತೆ ಆಯುಕ್ತರು ಸೂಚಿಸಿದ್ದಾರೆ.
ಅದೇ ರೀತಿ ಪ್ರತಿ ಶುಕ್ರವಾರ ಹಾಗೂ ಶನಿವಾರ ಕಾಲ್ನಡಿಗೆಯಲ್ಲಿ ಅತೀ ಸೂಕ ಹಾಗೂ ಜನಸಂದಣಿ ಏರಿಯಾದಲ್ಲಿ ಗಸ್ತು ತಿರುಗಲು ತಿಳಿಸಿದರು.ಈ ಎಲ್ಲಾ ಚಟುವಟಿಕೆಗಳಲ್ಲಿ ಇನ್?ಸಪೆಕ್ಟರ್‌ಗಳು,ಎಸಿಪಿಗಳು ಹಾಗೂ ಡಿಸಿಪಿಗಳು ಭಾಗವಹಿಸುವಂತೆ, ಈ ಬಗ್ಗೆ ಆಗಿಂದ್ದಾಗೆ ಕಂಟ್ರೋಲ್ ರೂಮ್‌ಗೆ ಮಾಹಿತಿ ನೀಡುವಂತೆ ಆಯುಕ್ತರು ಆದೇಶಿಸಿದ್ದಾರೆ.ಕಾರ್ಯಕ್ರಮದಲ್ಲಿ ಜಂಟಿ ಪೊಲೀಸ್ ಆಯುಕ್ತ ವಂಶಿಕೃಷ್ಣ, ಉಪ ಪೊಲೀಸ್ ಆಯುಕ್ತ ನೇಮೆಗೌಡ ಉಪಸ್ಥಿತರಿದ್ದರು.

# ಸಹಕಾರಿ ಸಂಘದ ನಿಜವಾದ ಆಸ್ತಿಯಂದರೆ ಅದು ಸಂಘದ ಶೇರುದಾರರು.

## ಸಂಗಮೇಶ್ವರ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರಿ ಸಂಘದ ಬ್ಯಾಂಕ 12.60 ಲಕ್ಷ ರೂ ನಿವ್ವಳ ಲಾಭ.

ಮುದ್ದೇಬಿಹಾಳ: ಕೇಸಾಪೂರ ಶ್ರೀ ಸಂಗಮೇಶ್ವರ ಸಹಕಾರಿ ಸಂಘದ ನಿಜವಾದ ಆಸ್ತಿಯಂದರೆ ಅದು ಸಂಘದ ಶೇರುದಾರರು ಮತ್ತು ರೈತರು ಅವರ ವಿಶ್ವಾಸದಿಂದ ಇಂದು ಸಂಘ ರಾಜ್ಯದಲ್ಲಿ ಉತ್ತಮ ಸಹಕಾರಿ ಸಂಘವೆಂದು ಗುರುತಿಸಿಕೊಂಡಿದೆ ಎಂದು ಮುಖ್ಯ ಕಾರ್ಯನಿರ್ವಾಹಾಧಿಕಾರಿ ರಾಮಣ್ಣ ಖಾನಾಪೂರ ಹೇಳಿದರು.

ತಾಲ್ಲೂಕಿನ ಕೇಸಾಪೂರ ಗ್ರಾಮದ ಶ್ರೀ ಸಂಗಮೇಶ್ವರ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರಿ ಸಂಘದ 25 ನೇ ವಾರ್ಷಿಕ ಮಹಾಸಭೆ ವಾರ್ಷಿಕ ವರದಿ ವಾಚಿಸಿ ಮಾತನಾಡಿದರು ಸಂಘ ಆರಂಭದಲ್ಲಿ 350 ಸದಸ್ಯರು ಹಾಗೂ ,3.50 ಲಕ್ಷ ದುಡಿಯುವ ಬಂಡವಾಳದೂಂದಿದೆ ಆರಂಭಗೊಂಡ ಇಂದು 2610 ಸದಸ್ಯರು ಹಾಗೂ 22 ಕೋಟಿ ರೂ



ದುಡಿಯುವ ಬಂಡವಾಳ ಹೊಂದಿದೆ ಪ್ರಸ್ತಕ ವರ್ಷ ಸಂಘ 12.60 ಲಕ್ಷ ರೂ ನಿವ್ವಳ ಲಾಭಗಳಿಸಿದೆ ಎಂದರು.

ಸಕಾಲದಲ್ಲಿ ತೆಗೆದುಕೊಂಡು ಸಾಲ ಮರುಪಾವತಿಸಬೇಕು ಕಟ್ ಬಾಕಿ ಆದಲ್ಲಿ ಕಾನೂನು ಕೈಗೊಳ್ಳಲು ಆದೇಶ ಬಂದಿರುತ್ತದೆ ಎಂದು ಮಾಹಿತಿ ನೀಡಿದರು.

ಸಂಘದ ಅಧ್ಯಕ್ಷ ಸಿದ್ದಪ್ಪ ತಳವಾರ, ಉಪಾಧ್ಯಕ್ಷ ಶರಣಪ್ಪ ಗಂಗಾವತಿ, ನಿರ್ದೇಶಕ ಜಗದೀಶ್ ಪಂಪಣ್ಣನವರ ಮಾತನಾಡಿ ಸಂಘದ ಸದಸ್ಯರು ಸಂಘದಲ್ಲಿ ವ್ಯವಹರಿಸಬೇಕು ಇದರಿಂದ ಸಂಘದ ಏಳ್ಗೆಗೆ ಸಾಧ್ಯವಾಗುತ್ತದೆ ಮತ್ತು ಸಹಕಾರಿ ಸಂಘದಲ್ಲಿಯ ಸಾಲದ ಸದುಪಯೋಗ ಪಡಿಸಿಕೊಂಡು ನಿಯಮಾನುಸಾರ ಸಾಲ ಮರುಪಾವತಿಸಬೇಕು ಸಂಘದ ಸದಸ್ಯರಿಗೆ ವೈಯಕ್ತಿಕ ಅಪಘಾತ ವಿಮೆ, ಯಶಸ್ವಿನಿ ಯೋಜನೆ ಸೌಲಭ್ಯವಿದೆ ಎಂದರು.

ಸಭೆಯಲ್ಲಿ ನಿರ್ದೇಶಕರಾದ ಬಿ ಬಿ ತಳವಾರ,ಜಿ.ಜಿ ಗೌಡರ,ಸಿ.ಎಸ್ ದೇಸಾಯಿ, ಎಸ್ ವೈ ವಡ್ಡರ,ಹೆಚ ಎಂ ಕಂಗಳ, ಎ.ಹೆಚ್ ವಾಲಿಕಾರ, ಶ್ರೀಮತಿ ಗಿರಿಜಾ ಪಾಟೀಲ್, ಜ್ಯೋತಿ ವಡ್ಡರ,ಭುವನೇಶ್ವರಿ ಪಡಶೆಟ್ಟಿ,ವೃತ್ತಿಪರ ನಿರ್ದೇಶಕರಾದ ಎಸ್ ಎ ಬಿರಾದಾರ, ಸಂತೋಷ ಎಚ ಎಂ ,ಗಣ್ಯರಾದ ಸಿ.ಎಸ್ ಗೂಳಿ,ಬಸಪ್ಪ ಕೇಸಾಪೂರ, ಕಾಶಪ್ಪ ವಾಲಿಕಾರ, ನಾಗಪ್ಪ ದಡ್ಡಿ,ಶಾಂತಗೌಡ ಬಿರಾದಾರ, ಧರೆಯಪ್ಪ ಜಂಬಗಿ, ಶ್ರೀಶೈಲ ಗೌಡರ, ಮಲ್ಲಪ್ಪ ಊಗರಗೋಳ,ಬೈಲಪ್ಪ ಸಣ್ಣ ಅಯ್ಯನಗೌಡ,ರಾಜು ಚಿನಿವಾರ,ಸಂಗನಗೌಡ ಗೌಡರ, ಶ್ರೀನಿವಾಸ ಗೌಂಡಿ,ಗುರುಬಸಪ್ಪ ಸಜ್ಜನ ಯಮನಪ್ಪ ವಡ್ಡರ, ಅಯ್ಯಪ್ಪ ಕಂಗಳ, ಚನ್ನಪ್ಪ ಗಡಿಣ ಅಶೋಕ ಹಗರಗೊಂಡ, ಅಮಾತ್ಯಪ್ಪ ನಾರಗಲ್ಲ, ಸಂಗನಗೌಡ ಪಾಟೀಲ್ ಸಂಗಪ್ಪ ವಜ್ಜಲ ಸೇರಿದಂತೆ ಸಂಘದ ಸಿಬ್ಬಂದಿಗಳು ಸದಸ್ಯರು ಭಾಗವಹಿಸಿದ್ದರು.
ಸ್ವಾಗತ ಎಸ್ ಎಸ್ ವಾಲಿಕಾರ, ಪ್ರಾಸ್ತಾವಿಕ ವೈ ಬಿ ತಳವಾರ,ಬಿ ಕೆ ಬಿರಾದಾರ ನಿರೂಪಿಸಿ ವಂದಿಸಿದರು.

ಡಿಜಿಟಲ್ ವಾರ್ತೆ

# ಕುಂಬಾರಹಳ್ಳಿ ಸರ್ವೇ ನಂ.8 ರಲ್ಲಿ ಕೋರ್ಟ್ ಸ್ಟೇ ಇರುವುದರಿಂದ ಯಾವುದೇ ನಿರ್ಧಾರ ತೆಗೆದುಕೊಳ್ಳಬಾರದು :ಕುಂಬಾರಹಳ್ಳಿ ಗ್ರಾಮಸ್ಥರ ಮನವಿ

ಪೀಣ್ಯದಾಸರಹಳ್ಳಿ: ದಾಸರಹಳ್ಳಿ ಕ್ಷೇತ್ರದ ಸಮೀಪದ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕುಂಬಾರಹಳ್ಳಿ ಗ್ರಾಮದಲ್ಲಿ 2025–26ನೇ ಸಾಲಿನ ಗ್ರಾಮ ಸಭೆ ಆಯೋಜಿಸಿದ್ದ. ಕುಂಬಾರಹಳ್ಳಿಯ ವಾರ್ಡ್ ಸಭೆಯಲ್ಲಿ ಸರ್ವೇ ನಂ.8 ರ ಜಮೀನಿಗೆ ಸಂಬಂಧಪಟ್ಟಂತೆ ಹೈಕೋರ್ಟ್ ನಲ್ಲಿ ವ್ಯಾಜ್ಯವಿರುವುದರಿಂದ ಯಾವುದೇ ನಿರ್ಧಾರ ತೆಗೆದುಕೊಳ್ಳಬಾರದೆಂದು ಕುಂಬಾರಹಳ್ಳಿಯ ಗ್ರಾಮಸ್ಥರು ಕಸಘಟ್ಟಪುರ ಗ್ರಾಮ ಪಂಚಾಯಿತಿ ಅಧ್ಯಕ್ಷರಿಗೆ ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾ–ರಿಗೆ ಮನವರಿಕೆ ಮಾಡಿ ಕೋರ್ಟ್ ಆದೇಶದ ಪ್ರತಿ ಹಾಗೂ ಮನವಿ ಪತ್ರವನ್ನು ನೀಡಿದರು.

ಸರ್ವೇ ನಂ.8ರ ಜಮೀನಿಗೆ ಸಂಬಂಧಿಸಿದಂತೆ ಕುಂಬಾರಹಳ್ಳಿಯ ಗ್ರಾಮಸ್ಥರ



ಪರವಾಗಿ ಮಾತನಾಡಿದ ಗ್ರಾಮಸ್ಥರಾದ ನರಸಿಂಹರಾಜು ಎನ್, 'ಕುಂಬಾರಹಳ್ಳಿಯ ಸರ್ವೆ ನಂ. 8 ರಲ್ಲಿ ನಾವು ಸುಮಾರು ನಲವತ್ತು ವರ್ಷಗಳಿಂದ 45 ಕುಟುಂಬಗಳು ಉಳುಮೆ ಮಾಡಿ ವ್ಯವಸಾಯ ಮಾಡುತ್ತಾ ಬಂದಿರುತ್ತೇವೆ. ಆದರೂ ಕೂಡಾ ಕೆಲವು ಕಾಣದ ಕೈಗಳು ಇದು ಗೋಮಾಳ ಎಂದು ಪ್ರಚಾರ ಮಾಡಲು ಯತ್ನಿಸಿದಾಗ ನಾವು ಆ ಜಾಗದ ಮೇಲೆ ಹೈಕೋರ್ಟ್ ನಿಂದ ತಡೆಯಾಜ್ಞೆ ತಂದಿದ್ದೇವೆ. ಹಾಗಾಗಿ ನ್ಯಾಯಾಲಯದಲ್ಲಿ ಪ್ರಕರಣ ತೀರ್ಮಾನವಾಗುವವರೆಗೂ ಯಾವುದೇ ನಿರ್ಧಾರವನ್ನು ಸದರಿ ಜಮೀನಿನ ವಿಷಯದಲ್ಲಿ ತೆಗೆದುಕೊಳ್ಳಬಾರದು.

ಹಾಗೆ ಮಾಡಿದ್ದೇ ಆದಲ್ಲಿ ನ್ಯಾಯಾಂಗ ನಿಂದನೆಯಾಗುತ್ತದೆ ಎಂಬುದನ್ನು ಮನವ–ರಿಕೆ ಮಾಡಿಕೊಟ್ಟಿದ್ದೇವೆ', ಎಂದು ತಿಳಿಸಿದರು. ಹಾಗೆಯೇ ವಾರ್ಡ್ ಸಭೆಗೆ ಸಂಬಂಧಿಸಿದ ಕರಪತ್ರದಲ್ಲಿ ನಿವೇಶನಕ್ಕೆ ಅರ್ಜಿಗಳನ್ನು ಸಲ್ಲಿಸಬಹುದು ಎಂದು ಸ್ಥಳೀಯರಲ್ಲದ ಬೇರೆ ಕಡೆಯಿಂದ ಬಂದು ಇಲ್ಲಿ ವಾಸವಾಗಿರುವ ಹಲವಾರು ಜನರಿಂದ ಅರ್ಜಿಗಳನ್ನು ಸ್ವೀಕರಿಸಿದ್ದಾರೆ. ಕುಂಬಾರಹಳ್ಳಿ ಗ್ರಾಮದವರಿಗೆ ಬಿಟ್ಟು ಬೇರೆಯವರಿಂದ ಅರ್ಜಿ ಸ್ವೀಕರಿಸುತ್ತಿರುವ ಇವರ ಉದ್ದೇಶ ನಮಗೆ ತಿಳಿಯುತ್ತಿಲ್ಲ. ಇದಕ್ಕೆ ಸಂಬಂಧಪಟ್ಟಂತೆ ಅಧ್ಯಕ್ಷರು ಜಾರಿಕೊಳ್ಳುವ ಉತ್ತರ ನೀಡುತ್ತಿದ್ದಾರೆ. ಈ ಮನವಿಗೆ ಪಂಚಾಯಿತಿ ಅಭಿವೃದ್ಧಿ ಅಧಕಾರಿಗಳು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ.

ಆದರೆ ಅಧ್ಯಕ್ಷರಿಂದ ಮಾತ್ರ ಸರಿಯಾದ ಉತ್ತರ ಸಿಕ್ಕಿಲ್ಲ. ಹಾಗಾಗಿ ಅವರ ಉದ್ದೇಶ ಏನೆಂಬುದು ತಿಳಿಯುತ್ತಿಲ್ಲ. ಹಾಗೇನಾದರೂ ಈ ಜಾಗದ ವಿಷಯದಲ್ಲಿ ಏನಾದರೂ ವ್ಯತಿ–ರಿಕ್ತವಾಗಿ ನಡೆದುಕೊಂಡಲ್ಲಿ ನ್ಯಾಯಾಂಗ ನಿಂದನೆ ಕೇಸ್ ಅನ್ನು ದಾಖಲಿಸಲಾಗುವುದು', ಎಂದು ಗ್ರಾಮಸ್ಥರ ಪರವಾಗಿ ತಿಳಿಸಿದರು. ಈ ಸಂದರ್ಭದಲ್ಲಿ ಹಲವಾರು ಮುಖಂಡರು, ಕುಂಬಾರಹಳ್ಳಿ ಗ್ರಾಮಸ್ಥರು, ಪಂಚಾಯಿತಿ ಅಧಿಕಾರಿಗಳು, ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

## 29 ರಂದು ಮಾಗಡಿ ಹಬ್ಬ ಕೆಂಪೇಗೌಡ ಜಯಂತೋತ್ಸವ ಡಾ:ಎಚ್ ಎಮ್ ಕೃಷ್ಣಮೂರ್ತಿ



ಮಾಗಡಿ: ಪಟ್ಟಣದ ಕೋಟೆ ಮೈದಾನದಲ್ಲಿ ಕಂಬ ಪೂಜೆ ನೆರವೇರಿಸಿ ಮಾತನಾಡಿದ ಡಾ: ಎಚ್. ಎಂ. ಕೃಷ್ಣಮೂರ್ತಿ ಅವರು 516ನೇ ಕೆಂಪೇಗೌಡರ ಜಯಂತೋತ್ಸವವನ್ನು 29–09–2025 ರಂದು ಮಕ್ಕಳಿಗೆ ಬ್ಯಾಗ್ ಮತ್ತು ಬುಕ್ ಕೊಡುವ ವ್ಯವಸ್ಥೆ ಮಾಡಿದ್ದೇವೆ ಏಕೆಂದರೆ ಮಾಗಡಿ ಕೆಂಪೇಗೌಡರು ಜಾತ್ಯತೀತವಾಗಿ ಇದ್ದವರು ಗುರುಕುಲವನ್ನು ಕಟ್ಟಿದಂತವರು ಮೊದಲಿಗೆ ರಾಮನಗರ ಜಿಲ್ಲೆಯಲ್ಲಿ 64 ಗುರುಕುಲ ಕಟ್ಟಿ ವಿದ್ಯೆಗೆ ಆದ್ಯತೆಯನ್ನು ಕೊಟ್ಟಿರುವಂತವರು ಆ ವಿದ್ಯೆಯನ್ನು ಕೊಟ್ಟು ಜನಗಳ ನೆಮ್ಮದಿಯಿಂದ ಜೀವನ ಮಾಡುತ್ತಿದ್ದಾರೆ.

ಟಕಲಿಕೆಯನ್ನು ಕಲಿತಿದ್ದಾರೆ ಮತ್ತು ಗುರು ಹಿರಿಯರ ಆಶೀರ್ವಾದ ಪಡೆದಿದ್ದಾರೆ ಮೂಲಪುರುಷರು ಮಾಗಡಿ ಕೆಂಪೇಗೌಡರು. ಮಕ್ಕಳಿಗೂ ಒಳ್ಳೇದು ಆಗಬೇಕು ಅವರ ಭವಿಷ್ಯವನ್ನು ರೂಪಿಸಿಕೊಳ್ಳಬೇಕು ಕೆಂಪೇಗೌಡರ ಆದಿಯಲ್ಲಿ ಸಾಗಬೇಕು. ಜಯಂತೋತ್ಸವಕ್ಕೆ ಸಾಕಷ್ಟು ಶ್ರೀಗಳು,ನಟಿ,ನಟಿಯರು ಚಿಂತಕರು,ಸಂಘ–ಸಂಸ್ಥೆಯರು ಅವರ ಜೊತೆ ಸಾರ್ವಜನಿಕರು ರೈತರು,ತಾಯಂದಿರು,ಶಾಲಾ ಮಕ್ಕಳು ಹಾದಿಯಾಗಿ ಇದು ಒಂದು ಮಾಗಡಿಯ ಹಬ್ಬ . ಪರಿವರ್ತನೆಯಾಗಿ ಕೋಟೆ 22 ವರ್ಷಗಳಾಯಿತು ಕೆಂಪೇಗೌಡ ಹುಟ್ಟುಹಬ್ಬ ನಾಡಿಗೆಲ್ಲ ಹಬ್ಬ. ಹಬ್ಬದಲ್ಲಿ ಯಾರಿಗೂ ನೋವು, ಹಸಿವು,ಬೇಜಾರು ಆಗದ ಹಾಗೆ ಏನಾದರೂ ಒಂದು ಕಾರ್ಯಕ್ರಮ ಹಮ್ಮಿಕೊಂಡಿದ್ದೇವೆ ಎಂದರೆ ಕೆಂಪೇಗೌಡರ ಕೃಪೆ ಮತ್ತು ಕಾಲಭೈರವೇಶ್ವರ ಆಶೀರ್ವಾದ.

ಇವತ್ತು ಕೋಟೆಯ ಮೈದಾನದಲ್ಲಿ ಈಶಾನ್ಯ ಮೂಲೆಯಲ್ಲಿ ಹಿಂದೂ ಸಂಪ್ರದಾಯದ ಪ್ರಕಾರ ಗರುಡುಗಂಬ ಪೂಜೆಯನ್ನು ಮಾಡಿ, ಕಾರ್ಯಕ್ರಮಕ್ಕೆ ಚಾಲನೆ ಕೊಟ್ಟಿದ್ದೇವೆ. ಕಾರ್ಯಕ್ರಮಕ್ಕೆ ಎಲ್ಲಾರೂ ಬರಲಿ ಎಂಬ ಆಸೆ ಮಾಗಡಿ ಹಬ್ಬಕ್ಕೆ ಎಲ್ಲರೂ ಸ್ವಂತ ಮನೆಯ ಹಬ್ಬ ಎಂದು ತಿಳಿದು ಎಲ್ಲರೂ 516ನೇ ಕೆಂಪೇಗೌಡ ಜಯಂತೋತ್ಸವವನ್ನು ಮಾಗಡಿ ಹಬ್ಬವನ್ನು ಅದ್ದೂರಿಯಾಗಿ ಆಚರಿಸಬೇಕು ಸರ್ವರು ಎಲ್ಲರೂ ಭಾಗವಹಿಸಿ.29–09–2025 ಸೋಮವಾರ ಬೆಳಗ್ಗೆ 10.33ರಿಂದ ಸಂಜೆಯವರೆಗೂ ಕಾರ್ಯಕ್ರಮ ನಡೆಯುತ್ತದೆ ಎಂದು ಎಚ್ಎಮ್ ಕೃಷ್ಣಮೂರ್ತಿಯವರು ಹೇಳಿದರು. ಮಾಗಡಿ ಪಟ್ಟಣದಲ್ಲಿ 516ನೇ ಕೆಂಪೇಗೌಡ ಜಯಂತೋತ್ಸವ ಸಂಭ್ರಮದಿಂದ ವಿಜೃಂಭಣೆಯಿಂದ ಸಾಗುತ್ತಿರುವುದಕ್ಕೆ ಗರುಡ ಗಂಭ ಪೂಜೆ ಮಾಡಿದರು. ಜಯಂತೋತ್ಸವಕ್ಕೆ ಶ್ರೀಗಳು, ನಟ, ನಟಿಯರು, ರಂಗ ಕರ್ಮಿಗಳು, ರೈತರು, ತಾಯಂದಿರು ಶಾಲಾ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ. ಹೆಚ್ ಎಂ ಕೃಷ್ಣಮೂರ್ತಿಯವರ ಸ್ವಂತ ಕಾರ್ಯಕ್ರಮವಲ್ಲ ಇಡೀ ಮಾಗಡಿಯಲ್ಲಿ ನಡೆಯುತ್ತಿರುವ ಮಾಗಡಿಗೆ ಹಬ್ಬ ಈ ಹಬ್ಬ ಯಶಸ್ವಿಯಾಗಲಿ ಎಂದು ಅಭಿನಂದನೆ ಸಲ್ಲಿಸುತ್ತೇನೆ ಎಂದು ಮಾಡಬಾಳ್ ಜಯರಾಮ್ ಹೇಳಿದ್ದಾರೆ ಮಾಡಬಾಳ್ ಜಯರಾಮ್. ಆನಂದ್. ರಾಮು. ಸೈಯದ್. ರಮೇಶ್. ಹೇಮಂತ್. ಮೋಹನ್. ಶ್ರೀನಿವಾಸ್. ಉಮೇಶ್. ರಾಜಣ್ಣ. ಇನ್ನೂ ಮುಂತಾದವರು ಉಪಸ್ಥಿತರಿದ್ದರು

## ಜೆ ಎಸ್ ಎಸ್ ಕಾಲೇಜಿನಲ್ಲಿ ವಿಕಸಿತ ಭಾರತ್ ಯುವಸಂವಾದ ಕಾರ್ಯಕ್ರಮ ಸಂಪನ್ನ

ಗುಂಡ್ಲುಪೇಟೆ: ಪಟ್ಟಣದ ಜೆ ಎಸ್ ಎಸ್ ಕಲಾ ಮತ್ತು ವಾಣಿಜ್ಯ ಕಾಲೇಜಿನಲ್ಲಿ ವಿಕಸಿತ ಭಾರತ್ ಯುವಸಂಸತ್ ಕಾರ್ಯಕ್ರಮವನ್ನ ಆಯೋಜನೆ ಮಾಡಲಾಗಿ–ತ್ತು. ಗುಂಡ್ಲುಪೇಟೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಜೆ ಎಸ್ ಎಸ್ ಕಾಲೇಜಿನ 300 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ವಿಕಸಿತ ಭಾರತದ ಕುರಿತು ವಿದ್ಯಾರ್ಥಿಗಳು ತಮ್ಮ ತಮ್ಮ ಅಭಿಪ್ರಾಯಗಳನ್ನ ಹಂಚಿಕೊಂಡರು.

ವಿಕಸಿತ ಭಾರತ 2047 ರ ಗುರಿ ಮುಟ್ಟಲು ಯುವಸಮೂಹದ ಪ್ರಯತ್ನ ಅತ್ಯಗತ್ಯ ಎಂದು ಯೂತ್ ಐಕಾನ್ ಮೈ ಭಾರತ್ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯ ಭಾರತ ಸರ್ಕಾರದ ವೇಣು ಗೋಪಾಲ್ ಕಲವಚೆರ್ಲಾ ಹೇಳಿದರು.
ಯುವಜನ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯ ಭಾರತ ಸರ್ಕಾರ ಚಾಮರಾಜನಗರ ವಿಶ್ವವಿದ್ಯಾಲಯ ಜೆ ಎಸ್ ಎಸ್ ಕಲಾ ಮತ್ತು ವಾಣಿಜ್ಯ ಕಾಲೇಜು ಗುಂಡ್ಲುಪೇಟೆ ಹಾಗೂ ರಾಷ್ಟ್ರೀಯ ಸೇವಾ ಯೋಜನೆ ಪ್ರಾದೇಶಿಕ ನಿರ್ದೇಶನಾಲಯ ಬೆಂಗಳೂರು ಇವರ ಸಹಯೋಗದೊಂದಿಗೆ ಪಟ್ಟಣದ ಜೆ ಎಸ್ ಎಸ್ ಕಾಲೇಜಿನಲ್ಲಿ



ಆಯೋಜಿಸಿದ್ದ ಕಾಲೇಜು ವಿದ್ಯಾರ್ಥಿಗಳೊಟ್ಟಿಗೆ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಭಾರತದ ಪ್ರಧಾನಮಂತ್ರಿಗಳ ಆಶಯದಂತೆ ಕಾಲೇಜುಗಳಲ್ಲಿ ವಿಕಸಿತ ಭಾರತದ ಕುರಿತು ಸಂವಾದಗಳನ್ನ ನಡೆಸಲು ಯುವಕರು ಮುಂದಾಗುವಂತೆ ಪ್ರೋತ್ಸಾಹಿಸಬೇಕು, ವಿಕಸಿತ ಭಾರತ @2047 ದೃಷ್ಟಿಕೋನವನ್ನಿರಿಸಿ ವಿವಿಧ ಕಾರ್ಯಕ್ರಮಗಳನ್ನ ರೂಪಿಸಲು ಮುಂದಾಗಬೇಕು ಎಂದು ಸಲಹೆ ನೀಡಿದರು. ವಿದ್ಯಾರ್ಥಿಗಳು ತಮ್ಮ ವಿಕಸಿತ ಭಾರತದ ದೃಷ್ಟಿಕೋನವನ್ನು ವ್ಯಕ್ತಪಡಿಸಲು ಅವಕಾಶ ನೀಡುವಂತಹ ರಸಪ್ರಶ್ನೆಗಳು, ಪ್ರಬಂಧ ಸ್ಪರ್ಧೆಗಳು ಮತ್ತು ಇತರ ಸ್ಪರ್ಧೆಗಳನ್ನು ಆಯೋಜಿಸಿ ನಾಯಕತ್ವ ಗುಣವನ್ನ ಬೆಳೆಸಿಕೊಳ್ಳಬೇಕು ಎಂದರು. ದೇಶಕ್ಕಾಗಿ ಸಂವಾದ ನಡೆಸಲು ವಿವಿಧ ಕ್ಷೇತ್ರಗಳಿವೆ ವಿಜ್ಞಾನ, ತಂತ್ರಜ್ಞಾನ, ಸಾಂಸ್ಕೃತಿಕ ಕಾರ್ಯಕ್ರಮದ ನೈಪುಣ್ಯತೆಗೆ ಸಂಬಂಧಿಸಿದಂತೆ ಪ್ರದರ್ಶನಗಳನ್ನ ನೀಡುವ ಮೂಲಕ ತಮ್ಮನ್ನ ತಾವು ತೊಡಗಿಸಿಕೊಳ್ಳಬೇಕು ಎಂದು ಕಿವಿ ಮಾತು ಹೇಳಿದರು.

ರಾಷ್ಟ್ರನಿರ್ಮಾಣ ಪ್ರಕ್ರಿಯೆಯಲ್ಲಿ ಯುವಕರ ಪಾತ್ರ ಮಹತ್ವದ್ದಾಗಿದ್ದು, ಈ ದಿಸೆಯಲ್ಲಿ ಯುವಶಕ್ತಿಯನ್ನು ಉತ್ತಮ ಕಾರ್ಯಗಳಿಗೆ ಬಳಸಿಕೊಳ್ಳಬೇಕು ಎಂದು ಚಾಮರಾಜನಗರ ವಿಶ್ವವಿದ್ಯಾಲಯ ಉಪಕುಲಪತಿ ಪ್ರೊ.ಎಂ.ಆರ್. ಗಂಗಾಧರ್ ಸಲಹೆ ನೀಡಿದರು.


## ಮಕ್ಕಳನ್ನು ಖಾಸಗಿ ಶಾಲೆಗಳಿಗೆ ಕಳಿಸದೇ ಗ್ರಾಮದಲ್ಲಿರುವ ಸರ್ಕಾರಿ ಶಾಲೆಗಳಿಗೆ ಸೇರಿಸಲು ಕರೆ.

# ಸರ್ಕಾರಿ ಶಾಲೆಗಳನ್ನು ಉಳಿಸಿ ಬೆಳೆಸಲು ಸಾಧ್ಯ

ಮುದ್ದೇಬಿಹಾಳ: ಮಕ್ಕಳನ್ನು ಖಾಸಗಿ ಶಾಲೆಗಳಿಗೆ ಕಳಿಸದೇ ಗ್ರಾಮದಲ್ಲಿರುವ ಸರ್ಕಾರಿ ಶಾಲೆಗಳಿಗೆ ಸೇರಿಸಬೇಕು. ಇದ–ರಿಂದ ಸರ್ಕಾರಿ ಶಾಲೆಗಳನ್ನು ಉಳಿಸಿ ಬೆಳೆಸಲು ಸಾಧ್ಯ. ಸರ್ಕಾರಿ ಶಾಲೆಯ ಶಿಕ್ಷಕರು ಅರ್ಹತಾ ಪರೀಕ್ಷೆ ಮೂಲಕ ಆಯ್ಕೆಗೊಂಡು ಹುದ್ದೆಗೆ ಬಂದಿರುತ್ತಾರೆ ಎಂದು ಕಿವಿಮಾತು ಹೇಳಿದರು.ಶಾಸಕ ಹಾಗೂ ಅಧ್ಯಕ್ಷ ಕೆಎಸ್ಡಿ–ಎಲ್ .ನಾಡಗೌಡ (ಅಪ್ಪಾಜಿ) ಹೇಳಿದರು.

ತಾಲೂಕಿನ ಕವಡಿಮಟ್ಟಿ ಗ್ರಾಪಂ ವ್ಯಾಪ್ತಿಯಲ್ಲಿ ಬರುವ ಹಳ್ಳಿಗಳಾದ ಕವಡಿಮಟ್ಟಿ ಜಲಪೂರ, ಸರೂರು, ಸರೂರು ತಾಂಡಾ ಗ್ರಾಮಗಳಲ್ಲಿ ಹಮ್ಮಿಕೊಂಡಿದ್ದ ಜನ ಸಂಪರ್ಕ ಸಭೆಯಲ್ಲಿ ಅವರು ಮಾತನಾಡಿದರು. ಸರ್ಕಾರಿ ಶಾಲಾ ಶಿಕ್ಷಕರಿಗಿಂತಲೂ ಖಾಸಗಿ ಶಾಲಾ ಶಿಕ್ಷಕರಲ್ಲಿ ಖಾಸಗಿ ಶಾಲೆಗಳ ವೈಭವಿಕರಣವಲ್ಲದೇ ಗುಣಮಟ್ಟ ಶಿಕ್ಷಣ ಕಾಣಲು ಸಾಧ್ಯವಿಲ್ಲ. ಸೌಲಭ್ಯಗಳನ್ನು ಪಡೆದುಕೊಳ್ಳಲು ಬರುವುದಿಲ್ಲ. ಗ್ರಾಮೀಣ ಭಾಗದ ಬಡವರ ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದು ಎಂಬ ಉದ್ದೇಶದಿಂದ ಸರ್ಕಾರ ಆನೇಕ ಸರಕಾರದ ಯೋಜನೆಗಳನ್ನು ಜಾರಿ ಮಾಡಿದೆ.

ಎಲ್ಲರುಮಕ್ಕಳನ್ನು ಖಾಸಗಿ ಶಾಲೆಗಳ ಅವಲಂಬಿಸದೇ ಸರ್ಕಾರಿ




ಶಾಲೆಗೆ ಸೇರಿಸಲು ಮುಂದಾಗಬೇಕು. ಕೃಷಿ ಚಟುವಟಿಕೆಗಳಿಗೆ ತೊಂದರೆಯಾಗದಂತೆ ರೈತರ ಹೊಲಗಳಿಗೆ ಸಂಪರ್ಕ ರಸ್ತೆ ನಿರ್ಮಿಸುವ ಮೂಲಕ ಅನುಕೂಲ ಮಾಡಿಕೊಡಲು ಕಂದಾಯ ಇಲಾಖೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದುರು. ಅಂಗನವಾಡಿ ಕೇಂದ್ರವು ಸಂಪೂರ್ಣ ಶಿಥಿಲಗೊಂಡಿದ್ದ ಹೊಸದಾಗಿ ನಿರ್ಮಿಸಿ ಕೊಡಬೇಕು ಎಂದು ಕವಡಿಮಟ್ಟ ಗ್ರಾಮಸ್ಥರು ಮನವಿ ಮಾಡಿದರು. ಈ ವೇಳೆ ಸಿಡಿಪಿಒ ಶಿವಮೂರ್ತಿ ಕುಂಬಾರ ಮಾತನಾಡಿ, ಕ್ಷೇತ್ರ ದಲ್ಲಿ ಈಗಾಗಲೇ ಸಮಸ್ಯೆಯ ಸುಳಿಯಲ್ಲಿರುವ 33 ಅಂಗವಾಡಿ ಕೇಂದ್ರಗಳನ್ನು ನಿರ್ಮಿಸಲು ಪ್ರತಿ ಅಂಗನವಾಡಿಗೆ 18 ಲಕ್ಷ ನಿಗದಿ ಮಾಡಿ ಸರ್ಕಾರ ತಿರ್ಮಾನಿಸಿದೆ. ಶೀಘ್ರವೇ ಕ್ರಮಕೈಗೊಳ್ಳಲಾಗುವುದು ಎಂದರು.

ಜಲಪೂರ ಮಾರ್ಗದ ಮೂಲಕ ರಾತ್ರಿ ಬಸ್ ಸೇವೆ ಪ್ರಾರಂಭಿಸಬೇಕು. ಕೆಲ ಹೊಗಳಲ್ಲಿ ಸವಳು ಜವಳಿನ ಸಮಸ್ಯೆಯಿಂದ ಉತ್ತಮ ಫಸಲು ಬರುತ್ತಿಲ್ಲ. ಈ ಕೂಡಲೇ ಸಮಸ್ಯೆಗಳನ್ನು ಬಗೆಹರಿಸಬೇಕು ಎಂದು ಜಲಪೂರ ಗ್ರಾಮಸ್ಥರು ಬೇಡಿಕೆ ಇಟ್ಟರು. ಬೇಡಿಕೆಗೆ ಸ್ಪಂಧಿಸಿದ ಶಾಸಕರು, ಕೆರೆ ಅಭಿವೃದ್ಧಿಗಾಗಿ ಸಣ್ಣ ನೀರಾವರಿ ಇಲಾಖೆ ಅಧಿಕಾರಿಗಳಿಗೆ, ಹೊಲಗಳ ಸವಳು ಜವಳ ಬಗ್ಗೆ ಹೆಚ್ಚಿನ ನಿಗಾವಹಿಸಿ ಕ್ರಮ ಗ್ರಾಮ ಪಂಚಾಯತ, ಕವಡಿಮಟ್ಟ ಜನ ಸಂಪರ್ಕ ಸಭೆ ಕೈಗೊಳ್ಳುವಂತೆ ಕೆಬಿಜೆ–ಎನ್ ಎಲ್ ಅಧಿಕಾರಿಗಳಿಗೆ ಸೂಚಿಸುತ್ತೇನೆ. ಹಾಗೂ ರಸ್ತೆ ನಿರ್ಮಿಸಲು ಕ್ರೀಯಾಯೋಜನೆ ತಯಾರಿಸಿ ರಸ್ತೆ ಮಾಡಲಾಗುವುದು, ಬಸ್ ಸೇವೆ ಒದಗಿಸುವಂತೆ ಕೆಎಸ್ಆರ್ಟಿಸಿ ಅಧಿಕಾರಿಗಳಿಗೆ ಸೂಚಿಸಲಾಗುವುದು ಎಂದು ಭರವಸೆ ನೀಡಿದರು.

ಗ್ರಾಮದಲ್ಲಿ ಸರ್ಕಾರಿ ಜಾಗವಿದ್ದು ಮನೆ ಕಟ್ಟಿಕೊ ಳ್ಳಲು ಸಾಧ್ಯವಾಗುತ್ತಿಲ್ಲ, ಸರ್ಕಾರದ ಸೌಲಭ್ಯಗಳು ಕೂಡ ಸಿಗುತ್ತಿಲ್ಲ. ಇದರಿಂದಾಗಿ ಕಡಬಡವರಿಗೆ ಮನೆ ಇಲ್ಲದಂತಾಗಿದೆ ಎಂದು ಕವಡಿಮಟ್ಟಿ ಗ್ರಾಮಸ್ಥರು ಆರೋಪಿಸಿದರು. ಜತೆಗೆ ಕವಡಿಮಟ್ಟಿ ಗ್ರಾಮಪಂಚಾ ಯಿತಿ ವ್ಯಾಪ್ತಿಯಲ್ಲಿ ಸುಮಾರು 32 ಎಕರೆಯಷ್ಟು ಸರ್ಕಾರಿ ಜಾಗೆ ಇದ್ದು, ಸುಮಾರು 4 ಎಕರೆಯಷ್ಟು ಜಮೀ ನಿನಲ್ಲಿ ಆಶ್ರಯ ಯೋಜನೆಯಡಿ ಮನೆ ನಿರ್ಮಿಸಿ ನಿರಾಶ್ರಿತ–ರಿಗೆ ಹಂಚಿಕೆ ಮಾಡಲು ವಿಶೇಷ ಅನುದಾನದ ಅವಶ್ಯಕತೆ ಇದೆ ಎಂದು ಪಿಡಿಒ ಪಿ. ಎಸ್. ಕಸನಕ್ಕಿ ಶಾಸಕರಿಗೆ ತಿಳಿಸಿದರು. ಇದಕ್ಕೆ ಪಂಚಾಯಿತಿಯಲ್ಲಿ ಸಮಾನ್ಯ ಸಭೆಯಲ್ಲಿ ಚರ್ಚಿಸಿ ಠರಾವು ಮಾಡಿ ನನಗೆ ಕೊಡಿ ಜಿಲ್ಲಾಧಿಕಾರಿಗಳ ಮುಖಾಂತರ ಸರ್ಕಾರದಿಂದ ಅನುದಾನ ತಂದು ಮನೆ ನಿರ್ಮಿಸಿ ಕೊಡಲಾಗುವುದು ಎಂದು ಭರವಸೆ ನೀಡಿದರು.

ಜಲಧಾರೆಯಲ್ಲಿ ಹೆಚ್ಚುವರಿ ನೀರು ಸಂಗ್ರಹ ಘಟಕ ನಿರ್ಮಿಸಲು ಮುಂದಾಗಿದ್ದು, ಬೇಗ ಸ್ಥಾಪಿಸಿ ಸಾರ್ವಜನಿಕ ರಿಗೆ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗುವುದು. ಗ್ರಾಮದಲ್ಲಿ ನೈರ್ಮಲ್ಯ, ಕೊಳಚೆ ನಿರ್ಮೂಲನೆಗಾಗಿ ಸರ್ಕಾರ ಈಗಾಗಲೇ 2024–25ಸಾಲಿನಲ್ಲಿ 1.40 ಕೋಟಿಯಲ್ಲಿನರೇಗಾ ಯೋಜನೆಯಡಿ ಗ್ರೇ ವಾಟ–ರ್ಮ್ಯಾನೇಜಮೆಂಟ್ ಕಾಮಗಾರಿಕೈ ಗೊಳ್ಳಲು ಅನುದಾನಮಂಜೂರಾಗಿದೆ. ಗುತ್ತಿಗೆದಾರರು ಅತಿ ಶೀಘ್ರದಲ್ಲಿಯೇ ಕಾಮಗಾರಿ ಪ್ರಾರಂಭಿಸಲಿದ್ದಾರೆ. ಈ ದಿಸೆಯಲ್ಲಿ ಗ್ರಾಮಗಳ ಮುಖ್ಯ ಹಾಗೂ ಸಂಪರ್ಕ ರಸ್ತೆಗಳ ಅಕ್ಕ ಪಕ್ಕದ ಮನೆ ಗಳ ಮಾಲಿಕರು ರಸ್ತೆ ಒತ್ತುವರಿಗೆ ಮಾಡಿಕೊಂಡರೆತೆರ ವುಗೊಳಿಸಲು ಮುಂದಾದರೇ ಸಹಕಾರ ನೀಡಿ. ಇದ ರಿಂದ ಗ್ರಾಮ ಸ್ವಚ್ಛವಾಗಿ ರೋಗ ಮುಕ್ತ ಪರಿಸರ ನಿರ್ಮಿಸಲು ಸಾಧ್ಯ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾಲೂಕು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗುರು ತಾರನಾಳ, ತಾಪಂ ಇಒ ವೆಂಕಟೇಶ ಒಂದಾಲ,ಕೃಷಿ ಅಧಿಕಾರಿ ಸುರೇಶ ಭಾವಿಕಟ್ಟಿ, ಪಶುವೈದ್ಯಾಧಿಕಾರಿ ಎಸ್.ಬಿ.ಮೇಟಿ, ತಾಲೂಕು ಆರೋಗ್ಯಾಧಿಕಾರಿ ಡಾ.ಸತೀಶ ತಿವಾರಿ, ತಾಲೂಕು ಅಕ್ಷರ ದಾಸೋಹದ ಸಹಾಯ ನಿರ್ದೇಶಕ ಎಂ.ಎಂ.ಬೆಳ ಗಲ್ಲ, ಪಿಎಸ್ಐ ಸಂಜಯಕುಮಾರ ತಿಪ್ಪಾರೆಡ್ಡಿ, ಗ್ರಾಪಂ ಅಧ್ಯಕ್ಷೆ ಶಕುಂತಲಾ ಹಂಡರಗಲ್ಲ, ತಾಪಂ ಯೋಜನಾ ನಿರ್ದೇಶಕ ಖೂಬಾಶಿಂಗ್ ಜಾಧವ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕಿ ಬಸಂತಿ ಮಠ, ಗ್ಯಾರಂಟಿ ಸಮಿತಿ ಸದಸ್ಯ ರಾಮಣ್ಣ ರಾಜನಾಳ,ಗ್ರಾಪಂ ಬಿಲ್ ಕಲೆಕ್ಟರ್ ದಂಡಪ್ಪ ವಾಲಿಕಾರ, ಗ್ರಾ ಪಂ ಸಿಬ್ಬಂದಿಗಳು ಸೇರಿದಂತೆ ಉಪಸ್ಥಿತರಿದ್ದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.